Akashavani 19.08.2025
Regional News Bulletin 7.05 AM
Read by: Arati Devashikhamani

<><><>

ಮುಖ್ಯಾಂಶಗಳು

- ಅನಧಿಕೃತ ಸಾಗುವಳಿ ಸಕ್ರಮಕ್ಕೆ, ಬಗ್ಗೈರ್ ಹುಕುಂ ತಂತ್ರಾಂಶ ಜಾರಿಗೆ.
- ಮಣ್ಣಿನ ಗಣೇಶ ವಿಗ್ರಹ ಮಾತ್ರ ಪ್ರತಿಷ್ಠಾಪಿಸುವಂತೆ, ಪರಿಸರ ಇಲಾಖೆ ಮನವಿ.
- ಉತ್ತರಕನ್ನಡ ಜಿಲ್ಲೆ ಯಲ್ಲಾಪುರದಲ್ಲಿ ವನವಾಸಿಗರ ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಇಲಾಖೆ ಕ್ರಮ.
- ಡಿ.ದೇವರಾಜ ಅರಸು ಪ್ರಶಸ್ತಿ; ಉಡುಪಿ ಜಿಲ್ಲೆಯ ಹಿರಿಯ ಪತ್ರಕರ್ತ ಕಲ್ಲೆ ಶಿವೋತ್ತಮ ರಾವ್ ಆಯ್ಕೆ.

ಈಗ ವಾರ್ತೆಗಳ ವಿವರ

ಅನಧಿಕೃತ ಸಾಗುವಳಿ ಸಕ್ರಮೀಕರಣ ಕೋರಿ ಸಲ್ಲಿಕೆಯಾಗಿರುವ ಹಾಗೂ ಸಮಿತಿಯಲ್ಲಿ ಬಾಕಿ ಇರುವ ಅರ್ಜಿಗಳನ್ನು ನಿರ್ವಹಿಸಲು ಬಗ್ಗೈರ್ ಹುಕುಂ ತಂತ್ರಾಂಶ ಜಾರಿಗೊಳಿಸಲಾಗಿದೆ ಎಂದು ಕಂದಾಯ ಖಾತೆ ಸಚಿವ ಕೃ ್ಣ ಬೈರೇಗೌಡ ತಿಳಿಸಿದ್ದಾರೆ. ವಿಧಾನಸಭೆಯ ಪ್ರಶ್ನೋತ್ತರ ವೇಳೆಯಲ್ಲಿ ಶಾಸಕ ಕೆ.ವೈ.ನಂಜೇಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಬಗ್ಗೈರ್ ಹುಕುಂ ತಂತ್ರಾಂಶ ಜಾರಿಯಿಂದಾಗಿ ಅರ್ಜಿಗಳನ್ನು ಶೀಘ್ರವಾಗಿ ಹಾಗೂ ಪಾರದರ್ಶಕವಾಗಿ ಪರಿಶೀಲಿಸಿ, ಸಮಿತಿಯ ಮುಂದೆ ಮಂಡಿಸಲು ಯಾವುದೇ ಲೋಪವಿಲ್ಲದಂತೆ ಅರ್ಹ ಸಾಗುವಳಿದಾರರಿಗೆ ಸಾಗುವಳಿ ಚೀಟಿ ನೀಡುವುದು, ಖಾತೆ ದಾಖಲೀಕರಿಸುವುದು, ಪೋಡಿ ಪ್ರಕ್ರಿಯೆಗೊಳಪಡಿಸಿ ನೋಂದಣಿ ಕಚೇರಿಯಲ್ಲಿ ಫಲಾನುಭವಿಗಳ ಹೆಸರಿಗೆ ನೋಂದಣಿ ಮಾಡಿಸಿ ಮಂಜೂರಾದರರಿಗೆ ಪಹಣಿ ವಿತರಿಸಲು ಕ್ರಮ ವಹಿಸಲಾಗುತ್ತಿದೆ ಎಂದು ತಿಳಿಸಿದರು.

<><><>

ಪರಿಸರ ಸ್ನೇಹಿಯಾದ ಬಣ್ಣ ರಹಿತ ಮಣ್ಣಿನ ಮೂರ್ತಿಗಳನು ಪ್ರತಿಷ್ಠಾಪಿಸುವ ಮೂಲಕ ಗಣೇಶನ ಹಬ್ಬವನ್ನು ಆಚರಿಸುವಂತೆ ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ. ಇತ್ತೀಚಿನ ವ ್ಗಗಳಲ್ಲಿ ನೀರಲ್ಲಿ ಕರಗದ ಪ್ಲಾಸ್ಟರ್ ಆಫ್ ಪ್ಯಾರೀಸ್ ಮತ್ತು ವಿ ಕಾರಿಯಾದ ರಾಸಾಯನಿಕ ಬಣ್ಣ ಲೇಪಿತ –ಪಿಓಪಿ ಮೂರ್ತಿಗಳ ಸಂಖ್ಯೆ ಹೆಚ್ಚಾಗಿದ್ದು, ಇವುಗಳ ವಿಸರ್ಜನೆಯಿಂದ ಜಲಚರಗಳು ಸಾವಿಗೀಡಾಗುತ್ತಿವೆ. ಜಲ ಮಾಲಿನ್ಯ ಕಾಯಿದೆಯಡಿ, ಯಾವುದೇ ಜಲ ಮೂಲದಲ್ಲಿ ಪಿಓಪಿ ಮೂರ್ತಿಗಳ ವಿಸರ್ಜನೆ ನಿ ೇಧಿಸಲಾಗಿದೆ. ಪರಿಸರಕ್ಕೆ ಮಾರಕವಾದ ಪಿಓಪಿ ಮೂರ್ತಿಗಳ ತಯಾರಿಕೆ, ಸಾಗಾಟ, ಮಾರಾಟ ಮತ್ತು ವಿಸರ್ಜನೆ ನಿ ೇಧಿಸಿ 2023ರ ಸಪ್ಟೆಂಬರ್ 15 ರಂದು ಸರ್ಕಾರ ಆದೇಶ ಹೊರಡಿಸಿದೆ. ಇತ್ತೀಚೆಗೆ ರಾಜ್ಯ ಹೈಕೋರ್ಟ್ ಈ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೆ ತರುವಂತೆ ನಿರ್ದೇಶನ ನೀಡಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಪರಿಸರ ಸ್ನೇಹಿ ಮಣ್ಣಿನ ಮೂರ್ತಿಗಳನ್ನು ಪೂಜಿಸಿ ಪರಿಸರ ಉಳಿಸುವಂತೆ ಕೋರಿದ್ದಾರೆ.

<><><>

ಉತ್ತರ ಕನ್ನಡ ಜಿಲ್ಲೆ ಯಲ್ಲಾಪುರದ ಕಾಳಮ್ಮ ನಗರದಲ್ಲಿರುವ ಪರಿಶಿ ್ಟ ಪಂಗಡದ ಮತ್ತು ಇತರೆ ಸಮುದಾಯಗಳ ಕಚ್ಚಾ ಮನೆಗಳಿಗೆ ಅಗತ್ಯ ದಾಖಲೆಗಳನ್ನು ಒದಗಿಸಿದಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ಇಂಧನ ಖಾತೆ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ. ವಿಧಾನ ಪರಿ ತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ಪರಿ ತ್ ಸದಸ್ಯ

ಶಾಂತರಾಮ ಸಿದ್ದಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಯಲ್ಲಾಪುರದ ಕಾಳಮ್ಮ ನಗರದಲ್ಲಿರುವ ಪರಿಶಿ ್ಟ ಪಂಗಡದ ಮತ್ತು ಇತರೆ ಸಮುದಾಯಗಳ ಕಚ್ಚಾ ಮನೆಗಳಿಗೆ ವಿದ್ಯುತ್ ಸಂಪರ್ಕ ನೀಡುವಂತೆ ಮನವಿಗಳು ಸ್ವೀಕೃತಗೊಂಡಿವೆ. ಆದರೆ, ವಿದ್ಯುತ್ ಸಂಪರ್ಕ ನೀಡಲು ಅಗತ್ಯವಿರುವ ದಾಖಲಾತಿಗಳನ್ನು ಒದಗಿಸಿರದ ಕಾರಣ, ಅರ್ಜಿ ನೊಂದಾವಣೆಗೊಂಡಿರುವುದಿಲ್ಲ ಎಂದರು.

<><><>

ಮೈಸೂರಿನ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದಲ್ಲಿ ಕೊಳಚೆ ಪ್ರದೇಶ ನಿರ್ಮೂಲನ ಮಂಡಳಿವತಿಯಿಂದ ನಿರ್ಮಾಣಗೊಂಡ ಬಡಾವಣೆಗಳಿಗೆ ಮೂಲಭೂತ ಸೌಲಭ್ಯ ಇನ್ನಿತರ ಕಾಮಗಾರಿಗಳನ್ನು ನಿರ್ವಹಿಸಲು, ಅನುದಾನಕ್ಕೆ ಆರ್ಥಿಕ ಇಲಾಖೆಗೆ ಪ್ರಸ್ತಾವ ಸಲ್ಲಿಸಲಾಗಿದೆ ಎಂದು ವಸತಿ ಖಾತೆ ಸಚಿವ ಜಮೀರ್ ಅಹಮ್ಮದ್ ಖಾನ್ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಕಲಾಪದ ವೇಳೆ ಶಾಸಕ ಜಿ.ಟಿ ದೇವೇಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಅಭಿವೃದ್ಧಿ ಪಡಿಸಲಾದ ಕೊಳಗೇರಿ ಪ್ರದೇಶಗಳನ್ನು ಯೋಜನೆಯ ಮಾರ್ಗಸೂಚಿಯನುಸಾರ ಮುಂದಿನ ನಿರ್ವಹಣೆಗೆ ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರಿಸಬೇಕಾಗುತ್ತದೆ ಹಾಗೂ ಕಟ್ಟಡಗಳ ನಿರ್ವಹಣೆಯನ್ನು Resident Welfare Association" ರವರಿಂದ ನಿರ್ವಹಣೆ ಮಾಡಬೇಕಾಗುತ್ತದೆ. ವಸತಿ ಬಡಾವಣೆಗಳ ಸಮುಚ್ಛಯಗಳ ದುರಸ್ತಿ ಹಾಗೂ ಮೂಲಭೂತ ಸೌಲಭ್ಯವನ್ನು ಒದಗಿಸಲು ಅಂದಾಜು ಪಟ್ಟಿ ತಯಾರಿಸಿ ನರ್ಮ್‌ಯೋಜನೆಯಡಿ ಕ್ರೋಡೀಕೃತವಾಗಿರುವ ಬಡ್ಡಿ ಮೊತ್ತದಡಿ ಭರಿಸಲು ಆರ್ಥಿಕ ಇಲಾಖೆಯನ್ನು ಕೋರಲಾಗಿದೆ ಎಂದರು.

<><><>

ಬೀದರಿನಲ್ಲಿ ಸುಸಜ್ಜಿತ ಜಿಲ್ಲಾಡಳಿತ ಸಂಕೀರ್ಣ ನಿರ್ಮಾಣಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ ಹಾಗೂ ಪೌರಾಡಳಿತ ಖಾತೆ ಸಚಿವ ರಹೀಮ್ ಖಾನ್ ಚಾಲನೆ ನೀಡಿದರು. ನಂತರ ಮಾತನಾಡಿದ ಸಚಿವ ಈಶ್ವರ ಖಂಡ್ರೆ, ಮೊದಲ ಹಂತದಲ್ಲಿ 8 ಕಚೇರಿಗಳ ಕಟ್ಟಡಗಳು ಆರಂಭವಾಗಲಿದ್ದು, ಎರಡನೇ ಹಂತದಲ್ಲಿ ಉಳಿದ ಕಚೇರಿಗಳನ್ನು ಸಹ ಆರಂಭಿಸಲಾಗುವುದು. ಮುಂಬರುವ ದಿನಗಳಲ್ಲಿ ಭವ್ಯ ಕ್ರೀಡಾಂಗಣವನ್ನು ಸಹ ನಿರ್ಮಿಸಲಾಗುವುದು. ಬೀದರನ್ನು ಮಹಾನಗರ ಪಾಲಿಕೆಯನ್ನಾಗಿ ಘೋಷಿಸಲಾಗಿದ್ದು ಹೆಚ್ಚಿನ ಅನುದಾನ ತರಲಾಗುವುದು. ಸ್ವಚ್ಛ, ಸುಂದರ, ಹಸಿರು ಬೀದರ ನಿರ್ಮಿಸಲು ಸರ್ಕಾರ ಬದ್ಧವಾಗಿದೆ. ಹಸಿರು ಹೆಚ್ಚಿಸಲು ಪ್ಲಾಸ್ಟಿಕಮುಕ್ತ ಬೀದರಿಗೆ ಸಾರ್ವಜನಿಕರು ಕೈಜೋಡಿಸಬೇಕು ಎಂದರು. ಸಚಿವ ರಹೀಮ್‌ಖಾನ್ ಮಾತನಾಡಿ, ಸುಸಜ್ಜಿತ ಪ್ರಜಾಸೌಧ ನಿರ್ಮಿಸುವುದು, ಮಹಾನಗರ ಪಾಲಿಕೆಗೆ 200 ಕೋಟಿ ರೂಪಾಯಿ ಅನುದಾನ ನೀಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿದೆ ಎಂದರು.

<><><>

ಈಗ ಪ್ರಕಟಣೆ. ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

<><><>

ಆತ್ಮನಿರ್ಭರ ಭಾರತ–ಪ್ರಧಾನಮಂತ್ರಿ ಕಿರು ಆಹಾರ ಸಂಸ್ಕರಣಾ ಘಟಕಗಳ ನಿಯಮಬದ್ಧಗೊಳಿಸುವಿಕೆ– ಪಿ.ಎಂ.ಎಫ್.ಎಂ.ಇ ಯೋಜನೆಯಡಿ, ಅರಿಶಿಣ, ಬೆಳ್ಳುಳ್ಳಿ, ಶುಂಠಿ ಮೊದಲಾದ ಸಾವಯವ ಆಹಾರ ಪದಾರ್ಥಗಳಿಂದ ಒಟ್ಟು 33 ಮೌಲ್ಯವರ್ಧಿತ ಉತ್ಪನ್ನಗಳನ್ನು ತಯಾರಿಸಿ ಯಶಸ್ವಿಯಾಗಿದ್ದಾರೆ. ಮೈಸೂರಿನ ಭಾನುಪ್ರಕಾಶ್. ಚಾಮರಾಜನಗರ ಜಿಲ್ಲೆ ಗುಂಡ್ಲುಪೇಟೆಯಲ್ಲಿ ಸ್ವಂತ ಉದ್ದಿಮೆ ನಡೆಸುತ್ತಿರುವ ಅವರು ಪ್ರದೇಶ ಸಮಾಚಾರಕ್ಕಾಗಿ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

<><><>

ಧ್ವನಿ–ಭಾನು ಪ್ರಕಾಶ (67 ಸೆಕೆಂದುಗಳು)

<><><>

ಡಿ.ದೇವರಾಜ ಅರಸು ಪ್ರಶಸ್ತಿಗೆ, ಉಡುಪಿ ಜಿಲ್ಲೆ, ಕಾರ್ಕಳದ ಹಿರಿಯ ಪತ್ರಕರ್ತ, 95 ವರ್ಷಗಳ, ಕಲ್ಲೆ ಶಿವೋತ್ತಮರಾವ್ ಆಯ್ಕೆಯಾಗಿದ್ದಾರೆ. ಪ್ರಶಸ್ತಿ 5 ಲಕ್ಷ ರೂಪಾಯಿ ನಗದು ಹಾಗೂ ಸ್ಮರಣಿಕೆ ಒಳಗೊಂಡಿದೆ. ದೇವರಾಜ ಅರಸು ಅವರ, 110ನೇ ಜನ್ಮ ದಿನಾಚರಣೆ ಅಂಗವಾಗಿ, ನಾಳೆ ಬೆಳಗ್ಗೆ 10.45ಕ್ಕೆ ಬೆಂಗಳೂರಿನ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಆಯೋಜಿತ ಸಮಾರಂಭದಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶಸ್ತಿಯನ್ನು ಪ್ರದಾನ ಮಾಡಿ, ಗೌರವಿಸಲಿದ್ದಾರೆ. ಸಾಮಾಜಿಕ ನ್ಯಾಯದ ಪರವಾಗಿ, ಕಲ್ಲೆ ಶಿವೋತ್ತಮರಾವ್ ಅವರು ನಡೆಸಿದ ಹೋರಾಟ, ದೇವರಾಜ ಅರಸು ಅವರ ತತ್ವ–ಸಿದ್ಧಾಂತಗಳ ಅನುಷ್ಟಾನಕ್ಕೆ

ವಹಿಸಿದ ಶ್ರಮ ಹಾಗೂ ಪತ್ರಕರ್ತರಾಗಿ ಸಲ್ಲಿಸಿದ, ಅನುಪಮ ಸೇವೆ ಪರಿಗಣಿಸಿ, ಪ್ರತಿಷ್ಟಿತ ದೇವರಾಜ ಅರಸು ಪ್ರಶಸ್ತಿಗೆ, ರಾಜ್ಯ ಸರ್ಕಾರ ಆಯ್ಕೆ ಮಾಡಿದೆ.

<><><>

ವಾಯಭಾರ ಕುಸಿತದ ಹಿನ್ನೆಲೆಯಲ್ಲಿ ರಾಜ್ಯದ ಹಲವೆಡೆ ಮಳೆ ಧಾರಾಕಾರವಾಗಿ ಸುರಿಯುತ್ತಿದೆ. ಧಾರವಾಡ ಜಿಲ್ಲೆಯಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ, ಸಂಬಂಧಪಟ್ಟ  ಇಲಾಖೆಗಳು ಮುಂಜಾಗ್ರತಾ ಕ್ರಮ ಕೈಗೊಳ್ಳುವುದು ಅಗತ್ಯ. ಮಳೆಯ ಪ್ರಮಾಣ ಹೆಚ್ಚಿದಂತೆ ಪ್ರವಾಹ, ರಸ್ತೆ ಅಪಘಾತ, ಮನೆ ಕುಸಿತ ಮುಂತಾದ ಅವಘಡಗಳು ಉಂಟಾಗುವ ಸಾಧ್ಯತೆ ಇರುವ ಹಿನ್ನೆಲೆ, ಸಾರ್ವಜನಿಕರ  ರಕ್ಷಣೆಗೆ ತಕ್ಷಣವೇ ಕ್ರಮ ಕೈಗೊಳ್ಳಬೇಕು. ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ. ಬೆಳಗಾವಿ ಜಿಲ್ಲೆಯಲ್ಲಿ ಭಾರಿ ಮಳೆಯ ವ್ಯಾಪಕತೆ ಮುಂದುವರಿದಿದ್ದು, ಜಿಲ್ಲೆಯ ಬೆಳಗಾವಿ, ಬೈಲಹೊಂಗಲ, ಕಿತ್ತೂರ, ಖಾನಾಪುರ, ರಾಮದುರ್ಗ, ಸವದತ್ತಿ, ಚಿಕ್ಕೋಡಿ, ಹುಕ್ಕೇರಿ ತಾಲ್ಲೂಕಿನ ಎಲ್ಲ ಅಂಗನವಾಡಿ ಕೇಂದ್ರ, ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಇಂದು ರಜೆ ಘೋಷಿಸಲಾಗಿದೆ. ಅದೇ ರೀತಿ ಬೆಳಗಾವಿ, ಬೈಲಹೊಂಗಲ, ಕಿತ್ತೂರು, ಖಾನಾಪುರ, ರಾಮದುರ್ಗ ಮತ್ತು ಸವದತ್ತಿ ತಾಲ್ಲೂಕಿನಲ್ಲಿ ಪದವಿಪೂರ್ವ ಕಾಲೇಜುಗಳಿಗೂ ರಜೆ ಘೋಷಿಸಿ, ಜಿಲ್ಲಾಧಿಕಾರಿ ಮೊಹಮ್ಮದ್ ರೋ ´ನ್ ಆದೇಶ ಹೊರಡಿಸಿದ್ದಾರೆ. ತುಂಗಭದ್ರಾ ಜಲಾಶಯಕ್ಕೆ ಒಳಹರಿವು 75 ರಿಂದ 80 ಸಾವಿರ ಕ್ಯೂಸೆಕ್ ನಷ್ಟಾಗಿದ್ದು, 85 ರಿಂದ 90 ಸಾವಿರ ಕ್ಯೂಸೆಕ್ ಪ್ರಮಾಣದ ನೀರನ್ನು ತುಂಗಭದ್ರಾ ನದಿಗೆ ಬಿಡಲಾಗುತ್ತಿದೆ. ಕಾರಣ, ನದಿ ಪಾತ್ರದ ಗ್ರಾಮಗಳು ಮತ್ತು ಸಾರ್ವಜನಿಕರ ರಕ್ಷಣೆಗೆ  ಮುನ್ನೆಚ್ಚರಿಕೆ ವಹಿಸಲು ಅಧಿಕಾರಿಗಳಿಗೆ ಆದೇಶಿಸಲಾಗಿದೆ. ತುಂಗಭದ್ರ ಜಲಾಶಯದ ಮೂಲಗಳ ಪ್ರಕಾರ, ತುಂಗಾ ಜಲಾಶಯದಿಂದ 75 ಸಾವಿರ, ಭದ್ರಾ ಜಲಾಶಯದಿಂದ 40 ಸಾವಿರ, ವರದಾ ನದಿಯಿಂದ 10 ಸಾವಿರ ಕ್ಯುಸೆಕ್ ಹಾಗೂ ಜಲಾಶಯದ ಜಲಾನಯನ ಪ್ರದೇಶದಲ್ಲಿ ಮಳೆ ನಿರಂತರವಾಗಿ ಸುರಿಯುತ್ತಿರುವ ಕಾರಣ ಒಳ ಹರಿವು ಹೆಚ್ಚುತ್ತಲೇ ಇದೆ. ಹಾಸನ ಜಿಲ್ಲೆಯ ಆಲೂರು, ಸಕಲೇಶಪುರ, ಅರಕಲಗೂಡು ಮತ್ತು ಬೇಲೂರು ತಾಲ್ಲೂಕಿನಲ್ಲಿ ಅಧಿಕ ಮಳೆ ಆಗುತ್ತಿರುವ ಹಿನ್ನಲೆಯಲ್ಲಿ ನಾಲ್ಕೂ ತಾಲೂಕುಗಳ ಪ್ರಾಥಮಿಕ, ಪ್ರೌಢ ಶಾಲೆಗಳು ಹಾಗೂ ಅಂಗನವಾಡಿಗಳಿಗೆ ಇಂದು ರಜೆ ಘೋಷಿಸಿ ಜಿಲ್ಲಾಧಿಕಾರಿ ಲತಾ ಕುಮಾರಿ ಆದೇಶ ಹೊರಡಿಸಿದ್ದಾರೆ.

<><><>